ಆಂಗ್ಲ ಭಾಷೆಯ **Government order No.RDP 74 EGS 2014 Bangalore Dated: 06-02-2014**ನ್ನು

ಕನ್ನಡಕ್ಕೆ ಅನುವಾದಿಸಿದ

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಅಧಿನಿಯಮದ ಪರಿಷ್ಕೃತ ಅನುಸೂಚಿ-I ಮತ್ತು IIನ್ನು ಅನುಷ್ಠಾನಗೊಳಿಸಲು ಆದೇಶವನ್ನು ಹೊರಡಿಸುವ ಕುರಿತು.

ಓದಲಾಗಿದೆ:

1. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಅಧಿನಿಯಮ – 2005
2. ಕೇಂದ್ರ ಸರ್ಕಾರದ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಕಾರ್ಯಾಚರಣೆಯ ಮಾರ್ಗಸೂಚಿಗಳು 2013, 4ನೇ ಆವೃತ್ತಿ
3. ಭಾರತ ಸರ್ಕಾರ ಅಧಿನಿಯಮದ ಅನುಸೂಚಿ-I ಮತ್ತು IIರನ್ನು ತಿದ್ದುಪಡಿ ಮಾಡಿ ಗ್ರಾಮೀಣಾಭಿವೃದ್ಧಿ ಮಂತ್ರಾಲಯದವರು ಹೊರಡಿಸಿರುವ ಅಧಿಸೂಚನೆಯ ಪತ್ರದ ಸಂಖ್ಯೆ: J-11011/5/2006 ದಿನಾಂಕ: 03-01-2014

*****

### ಪ್ರಸ್ತಾವನೆ

ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಮಂತ್ರಾಲಯವು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಅಧಿನಿಯಮದಡಿ ದಿನಾಂಕ: 07-09-2005ರ ತನ್ನ ಅಧಿಸೂಚನೆಯ ಮೂಲಕ ದೇಶದಲ್ಲಿ ಯೋಜನೆಯನ್ನು ಅನುಷ್ಠಾನವನ್ನು ಹಂತ ಹಂತವಾಗಿ ಜಾರಿಗೊಳಿಸಿರುತ್ತದೆ. ಇದೊಂದು ಹಕ್ಕು ಆಧಾರಿತ ಮತ್ತು ಬೇಡಿಕೆ ಆಧಾರಿತ ಕಾರ್ಯಕ್ರಮವಾಗಿರುತ್ತದೆ. ಯೋಜನೆಯ ವ್ಯಾಪ್ತಿಗೆ ಬರುವ ಗ್ರಾಮೀಣ ಪ್ರದೇಶಗಳ ಪ್ರತಿ ಗ್ರಾಮೀಣ ಕುಟುಂಬಕ್ಕೆ ಒಂದು ಆರ್ಥಿಕ ಸಾಲಿನಲ್ಲಿ 100 ದಿನಗಳಿಗೆ ಕಡಿಮೆ ಇಲ್ಲದಂತೆ ಉದ್ಯೋಗ ದಿನಗಳನ್ನು ಒದಗಿಸಲು ಅಧಿನಿಯಮದ ಪ್ರಕರಣ 4ರಡಿ ಪ್ರತಿ ರಾಜ್ಯ ಸರ್ಕಾರವು ಯೋಜನೆಯನ್ನು ರೂಪಿಸಲು ಅಧಿನಿಯಮವು ಅಜ್ಞಾಪಿಸುತ್ತದೆ. ಅದರಂತೆಯೇ, ರಾಜ್ಯ ಸರ್ಕಾರವು ಯೋಜನೆಯನ್ನು ರೂಪಿಸಿ, ಮಾರ್ಗಸೂಚಿಗಳಲ್ಲಿ ತಿಳಿಸಿರುವಂತೆ ಆದ್ಯತವಾರುಗೊಳಿಸಿದ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಮಾನವ ದಿನಗಳನ್ನು ಉತ್ಪಾದಿಸಿ ಆ ಮೂಲಕ ಗ್ರಾಮೀಣ ಕುಟುಂಬಗಳ ಜೀವನಧಾರ ಅಂಶಗಳನ್ನು 2006-07ನೇ ಸಾಲಿನಿಂದ ಬಲವರ್ದನೆಗೊಳಿಸುವಲ್ಲಿ ಕಾರ್ಯೋನ್ಮುಖವಾಗಿದೆ.

ಯೋಜನೆಯ ಅನುಷ್ಠಾನದ ಸಂಬಂಧ, ವಿವಿಧ ರಾಜ್ಯಗಳು ಒದಗಿಸಿರುವ ಹಿಮ್ಮಾಹಿತಿ ವರದಿಗಳ ಸಾಧಕ ಬಾಧಕಗಳನ್ನು ಪರಿಶೀಲಿಸಿದ ನಂತರ, ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಮಂತ್ರಾಲಯವು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಅಧಿನಿಯಮದ ಅನುಸೂಚಿ-I ಮತ್ತು IIನ್ನು ಅಧಿನಿಯಮದ ಪ್ರಕರಣ 29ರ ಉಪಪ್ರಕರಣ (1)ರಡಿ ಪ್ರದತ್ತವಾದ ಅಧಿಕಾರಗಳನ್ವಯ ತಿದ್ದುಪಡಿ ಮೂಲಕ ಪರಿಷ್ಕರಿಸಿರುತ್ತದೆ. ಪಂಚಾಯತ್ ರಾಜ್ ಸಂಸ್ಥೆಗಳನ್ನು ಬಲಪಡಿಸಲು ಹಾಗೂ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಅಧಿಸೂಚನೆಯನ್ನು ಹೊರಡಿಸಿ, ಅದನ್ನು ಭಾರತ ಸರ್ಕಾರದ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿರುತ್ತದೆ. ಪರಿಷ್ಕೃತ ಅನುಸೂಚಿ-I ಮತ್ತು IIರ ಅನುಷ್ಠಾನದಿಂದ ಎಲ್ಲಾ ಗ್ರಾಮಗಳ ಸರ್ವಾಂಗೀಣ ಅಭಿವೃದ್ಧಿಗೆ ನೆರವಾಗುವುದಲ್ಲದೇ ಗ್ರಾಮೀಣ ಮಟ್ಟದ ಜೀವನವು ಸುಧಾರಿಸುತ್ತದೆ. ಉಲ್ಲೇಖ-3ರಲ್ಲಿ ಪರಿಷ್ಕೃತ ಅನುಸೂಚಿ-I ಮತ್ತು IIರ ಆದೇಶವನ್ನು ಕೇಂದ್ರ ಸರ್ಕಾರವು ಹೊರಡಿಸಿರುವ ಹಿನ್ನಲೆಯಲ್ಲಿ, ತಕ್ಷಣದಿಂದಲೇ ಜಾರಿಗೆ ಬರುವಂತೆ ರಾಜ್ಯ ಸರ್ಕಾರದ ಆದೇಶವನ್ನು ಹೊರಡಿಸುವುದು ಅವಶ್ಯಕವೆಂದು ಭಾವಿಸಿ, ಈ ಕೆಳಕಂಡ ಆದೇಶ ಹೊರಡಿಸಿದೆ.

ಜಂಟಿ ನಿರ್ದೇಶಕರು (ತಾಂತ್ರಿಕ)

*ಸರ್ಕಾರದ ಆದೇಶದ ಸಂಖ್ಯೆ ಗ್ರಾಅಪ 74 ಉಖಾಯೋ 2014 ಬೆಂಗಳೂರು ದಿನಾಂಕ: 06-02-2014*

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಅಧಿನಿಯಮದ ಪ್ರಕರಣ 29ರ ಉಪಪ್ರಕರಣ (1)ರಡಿ ಪ್ರದತ್ತವಾದ ಅಧಿಕಾರಗಳನ್ವಯ ಕೇಂದ್ರ ಸರ್ಕಾರದ ಗ್ರಾಮೀಣ ಅಭಿವೃದ್ಧಿ ಮಂತ್ರಾಲಯದವರು ಅಧಿನಿಯಮದಲ್ಲಿ ತಿದ್ದುಪಡಿ ಮೂಲಕ ಪರಿಷ್ಕರಿಸಿದ ಅನುಸೂಚಿ-I ಮತ್ತು IIನ್ನು ಈ ಆದೇಶದೊಂದಿಗೆ ಲಗತ್ತಿಸಿರುವಂತೆ ಕೂಡಲೇ ಜಾರಿಗೊಳಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

ಸಹಿ/-

(ಮುನೀಶ್ ಮೌದ್ಗಿಲ್)
ಆಯುಕ್ತರು, ಗ್ರಾಮೀಣಾಭಿವೃದ್ಧಿ
ಮತ್ತು ಸರ್ಕಾರದ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಗೆ:**

1. ಮಹಾಲೇಖಪಾಲರು, ಕರ್ನಾಟಕ ಸರ್ಕಾರ, ಬೆಂಗಳೂರು/ಧಾರವಾಡ
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು

**ಪ್ರತಿಯನ್ನು:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು
6. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
7. ವಿಶೇಷ ಆಯುಕ್ತರು (ಅರಣ್ಯ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
8. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು (ಅರಣ್ಯ ಪಡೆ ಮುಖ್ಯಸ್ಥರು), ಅರಣ್ಯ ಭವನ, ಬೆಂಗಳೂರು/ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು (ಸಾಮಾಜಿಕ ಅರಣ್ಯ), ಅರಣ್ಯ ಭವನ, ಬೆಂಗಳೂರು
9. ಪ್ರಾದೇಶಿಕ ಆಯುಕ್ತರು ಬೆಂಗಳೂರು, ಮೈಸೂರು, ಗುಲ್ಬರ್ಗಾ, ಬೆಳಗಾಂ
10. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು

11. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು
12. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು
13. ಆಯುಕ್ತರು, ಪಶುಸಂಗೋಪನ ಇಲಾಖೆ, ವಿ.ವಿ.ಟವರ್, ಬೆಂಗಳೂರು
14. ರೇಷ್ಮೆ ಅಭಿವೃದ್ಧಿ ಆಯುಕ್ತರು, ರೇಷ್ಮೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
15. ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲ್‌ಬಾಗ್ ರಸ್ತೆ, ಬೆಂಗಳೂರು
16. ನಿರ್ದೇಶಕರು, ಮೀನುಗಾರಿಕೆ ಇಲಾಖೆ, ವಿ.ವಿ.ಟವರ್, ಬೆಂಗಳೂರು
17. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್, ಗ್ರಾಮೀಣಾಭಿವೃದ್ಧಿಯ ರಾಜ್ಯ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರು-570011
18. ಮುಖ್ಯ ಅಭಿಯಂತರರು (ಸಣ್ಣ ನೀರಾವರಿ) ಜಲ ಸಂಪನ್ಮೂಲ ಇಲಾಖೆ ಆನಂದ್‌ರಾವ್ ವೃತ್ತ ಬೆಂಗಳೂರು
19. ಮುಖ್ಯ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರ್ ಇಲಾಖೆ, ಬೆಂಗಳೂರು
20. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ನಿರ್ದೇಶಕರುಗಳು
21. ಆತಂರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ ಬೆಂಗಳೂರು
22. ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಆಯುಕ್ತಾಲಯ ಎಲ್ಲಾ ಅಧಿಕಾರಿಗಳಿಗೆ
23. ರಾಜ್ಯದ ಎಲ್ಲಾ ಜಿಲ್ಲೆಗಳ ಒಂಬುಡ್ಸ್‌ಮನ್‌ಗಳಿಗೆ
24. ಶ್ರೀ. ಶ್ರೀನಿವಾಸ ಮಾರಂಗಪ್ಪನವರ್ ವಿಶೇಷಾಧಿಕಾರಿ ಗಣಕಕೋಶ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರು ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು ಕೋರಿದೆ.
25. ಶ್ರೀ. ವೈ. ಷುಹಾಂಕಾಳಪ್ಪ ಸಂಪಾದಕರು ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿಗಳವರ ಮಾಹಿತಿಗಾಗಿ ಹಾಗೂ ಇದನ್ನು ಕರ್ನಾಟಕ ವಿಕಾಸದಲ್ಲಿ ಪ್ರಕಟಿಸಲು ಕೋರಿದೆ.
26. M/s Effia Technologies, ಅವರಿಗೆ www.end2endsolutions.comನಲ್ಲಿ ಪ್ರಕಟಿಸಲು/ಅಳವಡಿಸಲು ಕೋರಿದೆ.
27. ಹೆಚ್ಚಿನ ಪ್ರತಿಗಳು/ಮಹಾ ಕಡತಕ್ಕೆ

**ಆಂಗ್ಲ ಭಾಷೆಯ ಆದೇಶವನ್ನು ಕನ್ನಡಕ್ಕೆ ಅನುವಾದಿಸಿರುವುದನ್ನು ದೃಢೀಕರಿಸಿದೆ.**

**ಜಂಟಿ ನಿರ್ದೇಶಕರು (ತಾಂತ್ರಿಕ)**
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
~~ಗ್ರಾಮೀಣಾಭಿವೃದ್ಧಿ ಮತ್ತು~~ ಪಂಚಾಯತ್ ರಾಜ್ ಇಲಾಖೆ
ಬೆಂಗಳೂರು